# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬಿ12(1)ಪಿಆರ್/147/2006-07
2021-22

ಮುಖ್ಯ ಆಯುಕ್ತರವರ ಕಛೇರಿ,
ಮಹಾನಗರ ಪಾಲಿಕೆ ಕಛೇರಿಗಳು
ಬೆಂಗಳೂರು, ದಿನಾಂಕ: 26/11/21

## ಸುತ್ತೋಲೆ

ವಿಷಯ: ಪಾಲಿಕೆಯ ಅಧಿಕಾರಿ / ನೌಕರರುಗಳು ಆಸ್ತಿ ಮತ್ತು ಹೊಣೆಗಾರಿಕೆಗಳ ವಿವರ ಪಟ್ಟಿಗಳನ್ನು ನಿಗಧಿತ ಅವಧಿಯಲ್ಲಿ ಸಕ್ಷಮ ಪ್ರಾಧಿಕಾರಕ್ಕೆ ಸಲ್ಲಿಸುವ ಬಗ್ಗೆ.

ಉಲ್ಲೇಖ: 1) ಕರ್ನಾಟಕ ರಾಜ್ಯ ನಾಗರೀಕ ಸೇವಾ (ನಡತೆ) ನಿಯಮಗಳು, 2021

2) ಸರ್ಕಾರದ ಸುತ್ತೋಲೆ ಸಂಖ್ಯೆ; ಸಿಆಸುಇ 65 ಸೇನಿಸಿ 2021, ದಿನಾಂಕ: 02-11-2021

* * * * *

ಮೇಲ್ಕಂಡ ಉಲ್ಲೇಖಗಳಿಗೆ ಸಂಬಂಧಿಸಿದಂತೆ, ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು-2021, ದಿನಾಂಕ: 07–01–2021 ರಿಂದ ಜಾರಿಗೆ ಬಂದಿರುತ್ತದೆ. ಅದರಂತೆ, ನಿಯಮ-24 ಕಲಂ(2)ರನ್ವಯ ಎಲ್ಲಾ ಸರ್ಕಾರಿ ನೌಕರನು ಡಿಸೆಂಬರ್ 31ಕ್ಕೆ ಅಂತ್ಯಗೊಳ್ಳುವ ಪ್ರತಿ ಹನ್ನೆರಡು ತಿಂಗಳಿಗೊಮ್ಮೆ ತನ್ನ ಮತ್ತು ತನ್ನ ಕುಟುಂಬದ ಎಲ್ಲಾ ಸದಸ್ಯರ ಆಸ್ತಿಗಳ ಮತ್ತು ಹೊಣೆಗಾರಿಕೆಗಳ ವಾರ್ಷಿಕ ವಿವರ ಪಟ್ಟಿಯನ್ನು ಪೂರಕ ದಾಖಲೆಗಳನ್ನು ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರಕ್ಕೆ ಸಲ್ಲಿಸತಕ್ಕದ್ದು ಎಂದಿರುತ್ತದೆ.

ಆದ್ದರಿಂದ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಗ್ರೂಪ್ ಎ ಮತ್ತು ಬಿ ವೃಂದದ ಅಧಿಕಾರಿಗಳು ಆಸ್ತಿ ಮತ್ತು ಋಣಭಾರ ಪ್ರಪತ್ರಗಳನ್ನು ಮುಖ್ಯ ಆಯುಕ್ತರು ರವರ ಆಡಳಿತ ಶಾಖೆಗೆ ಹಾಗೂ ಗ್ರೂಪ್ ಸಿ ಮತ್ತು ಡಿ ವೃಂದದ ಸಿಬ್ಬಂದಿಗಳು ಆಸ್ತಿ ಮತ್ತು ಋಣಭಾರ ಪ್ರಪತ್ರಗಳನ್ನು ತಮ್ಮ ಬಟವಾಡೆ ಅಧಿಕಾರಿಗಳಿಗೆ ಸಲ್ಲಿಸಲು ಸೂಚಿಸಿದೆ. ಆಡಳಿತ ಶಾಖೆಯ ವಿಷಯ ನಿರ್ವಾಹಕರುಗಳು ತಮ್ಮ ವಿಭಾಗಗಳಿಗೆ ಸಂಬಂಧಿಸಿದ ಗ್ರೂಪ್ ಎ ಮತ್ತು ಬಿ ವೃಂದದ ಅಧಿಕಾರಿಗಳ ಆಸ್ತಿ ಮತ್ತು ಋಣಭಾರ ಪ್ರಪತ್ರಗಳನ್ನು ಸ್ವೀಕರಿಸಿ ಸಮುಚಿತ ಮಾರ್ಗದಲ್ಲಿ ಉಪ ಆಯುಕ್ತರು (ಆಡಳಿತ) ರವರ ಅವಗಾಹನೆಗೆ ಮಂಡಿಸಲು ಸೂಚಿಸಿದೆ ಹಾಗೂ ನಿಯೋಜನೆ ಮೇಲೆ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ / ನೌಕರರುಗಳು ಆಸ್ತಿ ಮತ್ತು ಹೊಣೆಗಾರಿಕೆ ವಿವರಗಳನ್ನು ತಮ್ಮ ನಿಗಧಿತ ಸಕ್ಷಮ ಪ್ರಾಧಿಕಾರಕ್ಕೆ ಸಲ್ಲಿಸಲು ಸೂಚಿಸಿದೆ.

ಮೇಲ್ಕಂಡಂತೆ, ಆಸ್ತಿ ಮತ್ತು ಹೊಣೆಗಾರಿಕೆ ವಿವರಗಳನ್ನು ಸ್ವೀಕರಿಸಲು ಸೂಚಿಸಲಾದ ಸಕ್ಷಮ ಪ್ರಾಧಿಕಾರಕ್ಕೆ ಪಾಲಿಕೆಯ ಎಲ್ಲಾ ಗ್ರೂಪ್-ಎ, ಬಿ, ಸಿ ಮತ್ತು ಡಿ ಅಧಿಕಾರಿ / ನೌಕರರುಗಳನ್ನು ಒಳಗೊಂಡಂತೆ ಆಸ್ತಿ ಮತ್ತು ಹೊಣೆಗಾರಿಕೆ ವಿವರಗಳ ಪಟ್ಟಿಯನ್ನು ಕಡ್ಡಾಯವಾಗಿ ಡಿಸೆಂಬರ್-31ರ ಅಂತ್ಯಕ್ಕೆ ಇರುವಂತೆ ನಿಗಧಿತ ನಮೂನೆಯಲ್ಲಿ ಡಿಸೆಂಬರ್-31ರ ಅಂತ್ಯಕ್ಕೆ ಸಲ್ಲಿಸತಕ್ಕದ್ದು. ತಪ್ಪಿದಲ್ಲಿ ಡಿಸೆಂಬರ್ ತಿಂಗಳ ವೇತನವನ್ನು ಕಟಾವು ಮಾಡಲು ಸಂಬಂಧಪಟ್ಟ ಬಟವಾಡೆ ಅಧಿಕಾರಿಗಳು ಕ್ರಮವಹಿಸುವುದು ಹಾಗೂ ಇಲ್ಲದಿದ್ದಲ್ಲಿ ಕರ್ನಾಟಕ ಸರ್ಕಾರಿ ಸೇವಾ ನಿಯಮಗಳು (ಸಿ.ಸಿ.ಎ) ನಿಯಮಗಳು–1957ರ ಅಡಿಯಲ್ಲಿ ಶಿಸ್ತು ಕ್ರಮ ಜರುಗಿಸಲಾಗುವುದು.

26/11/21
ವಿಶೇಷ ಆಯುಕ್ತರು (ಆಡಳಿತ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

Office of the IT Advisor
No. 68
Date 30/11/21

ಪ್ರತಿಯನ್ನು : ಮಾನ್ಯ ಆಡಳಿತಗಾರರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿಯವರಿಗೆ ಕಳುಹಿಸಿದೆ.
: ಮಾನ್ಯ ಆಯುಕ್ತರು ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ಮಾನ್ಯ ವಿಶೇಷ ಆಯುಕ್ತರು (ಯೋಜನೆ) / (ಆಡಳಿತ) / (ಹಣಕಾಸು) / (ಕಲ್ಯಾಣ) / (ಜಾಹೀರಾತು) / (ಆಸ್ತಿಗಳು) / (ಕಂದಾಯ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ಎಲ್ಲಾ ವಲಯ ಅಪರ/ಜಂಟಿ ಆಯುಕ್ತರವರಿಗೆ ಮಾಹಿತಿಗೆ ಕಳುಹಿಸಿದೆ.
: ಎಲ್ಲಾ ವಲಯ ಇಲಾಖಾ ಮುಖ್ಯಸ್ಥರುಗಳಿಗೆ / ಎಲ್ಲಾ ಬಟವಾಡೆ ಅಧಿಕಾರಿಗಳಿಗೆ ಮಾಹಿತಿಗೆ ಕಳುಹಿಸಿದೆ.
: ಮಾಹಿತಿ ತಂತ್ರಜ್ಞಾನ ಸಲಹೆಗಾಗರರು ರವರಿಗೆ ಕಳುಹಿಸುತ್ತಾ, ಪಾಲಿಕೆಯ ವೈಬ್‌ಸೈಟ್‌ನಲ್ಲಿ ಅಳವಡಿಸಿಕೊಳ್ಳಲು ಸೂಚಿಸಿದೆ.
: ಕಛೇರಿ ಪ್ರತಿ. [IPP]

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬಿ12(1)ಪಿಆರ್/147/2006-07
2021-22

ಮುಖ್ಯ ಆಯುಕ್ತರವರ ಕಛೇರಿ,
ಮಹಾನಗರ ಪಾಲಿಕೆ ಕಛೇರಿಗಳು
ಬೆಂಗಳೂರು, ದಿನಾಂಕ: 26/11/21

**ಆಂತರಿಕ ಕಛೇರಿ ಟಿಪ್ಪಣಿ**

**ವಿಷಯ: ಪಾಲಿಕೆಯ ಅಧಿಕಾರಿ / ನೌಕರರುಗಳು ಆಸ್ತಿ ಮತ್ತು ಹೊಣೆಗಾರಿಕೆಗಳ ವಿವರ ಪಟ್ಟಿಗಳನ್ನು ನಿಗಧಿತ ಅವಧಿಯಲ್ಲಿ ಸಕ್ಷಮ ಪ್ರಾಧಿಕಾರಕ್ಕೆ ಸಲ್ಲಿಸುವ ಬಗ್ಗೆ.**

**ಉಲ್ಲೇಖ:** 1) **ಕರ್ನಾಟಕ ರಾಜ್ಯ ನಾಗರೀಕ ಸೇವಾ (ನಡತೆ) ನಿಯಮಗಳು**, 2021
2) **ಸರ್ಕಾರದ ಸುತ್ತೋಲೆ ಸಂಖ್ಯೆ; ಸಿಆಸುಇ** 65 **ಸೇನಿಸಿ** 2021, **ದಿ:** 02-11-2021

* * * * *

ಮೇಲ್ಕಂಡ ಉಲ್ಲೇಖಗಳಿಗೆ ಸಂಬಂಧಿಸಿದಂತೆ, ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು-2021, ದಿನಾಂಕ: 07-01-2021 ರಿಂದ ಜಾರಿಗೆ ಬಂದಿರುತ್ತದೆ. ಅದರಂತೆ, ನಿಯಮ-24 ಕಲಂ(2)ರನ್ವಯ ಎಲ್ಲಾ ಸರ್ಕಾರಿ ನೌಕರನು ಡಿಸೆಂಬರ್ 31ಕ್ಕೆ ಅಂತ್ಯಗೊಳ್ಳುವ ಪ್ರತಿ ಹನ್ನೆರಡು ತಿಂಗಳಿಗೊಮ್ಮೆ ತನ್ನ ಮತ್ತು ತನ್ನ ಕುಟುಂಬದ ಎಲ್ಲಾ ಸದಸ್ಯರ ಆಸ್ತಿಗಳ ಮತ್ತು ಹೊಣೆಗಾರಿಕೆಗಳ ವಾರ್ಷಿಕ ವಿವರ ಪಟ್ಟಿಯನ್ನು ಪೂರಕ ದಾಖಲೆಗಳನ್ನು ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರಕ್ಕೆ ಸಲ್ಲಿಸತಕ್ಕದ್ದು ಎಂದಿರುತ್ತದೆ.

ಆದರೆ, ಪಾಲಿಕೆಯ ಕೆಲವು ಖಾಯಂ ಅಧಿಕಾರಿಗಳು ಹಾಗೂ ನಿಯೋಜನೆ ಮೇಲೆ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ / ನೌಕರರುಗಳು ತಮ್ಮ ಹಾಗೂ ತಮ್ಮ ಕುಟುಂಬದ ಸದಸ್ಯರ ಆಸ್ತಿ ಮತ್ತು ಹೊಣೆಗಾರಿಕೆಯ ವಿವರಗಳ ಪಟ್ಟಿಯನ್ನು ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರಕ್ಕೆ ನಿಗಧಿತ ಅವಧಿಯಲ್ಲಿ ಸಲ್ಲಿಸದೇ ಇರುವುದನ್ನು ಗಂಭೀರವಾಗಿ ಪರಿಗಣಿಸಲಾಗಿರುತ್ತದೆ.

ಆದ್ದರಿಂದ, ಈ ಬಗ್ಗೆ ತಮ್ಮ ಹಂತದಲ್ಲಿ ಆಸ್ತಿ ಮತ್ತು ಹೊಣೆಗಾರಿಕೆ ವಿವರಗಳನ್ನು ಸಲ್ಲಿಸಿರುವ / ಸಲ್ಲಿಸದೇ ಇರುವ ಅಧಿಕಾರಿ / ನೌಕರರುಗಳ ವಿವರಗಳೊಂದಿಗೆ ವರದಿ ನೀಡಲು ಹಾಗೂ ಸಲ್ಲಿಸದೇ ಇರುವ ಅಧಿಕಾರಿ / ನೌಕರರುಗಳಿಗೆ ಕಾರಣ ಕೇಳಿ ನೋಟೀಸ್ ಜಾರಿ ಮಾಡಿ ಶಿಸ್ತು ಕ್ರಮ ಜರುಗಿಸುವ ಸಂಬಂಧ ಅಗತ್ಯ ಕ್ರಮಕೈಗೊಳ್ಳಲು ಸೂಚಿಸಿದೆ. ತಪ್ಪಿದಲ್ಲಿ ಕರ್ನಾಟಕ ಸರ್ಕಾರಿ ಸೇವಾ ನಿಯಮಗಳು (ಸಿ.ಸಿ.ಎ) ನಿಯಮಗಳು-1957ರ ಅಡಿಯಲ್ಲಿ ಶಿಸ್ತು ಕ್ರಮ ಜರುಗಿಸಲಾಗುವುದು.

26/11/21
**ವಿಶೇಷ ಆಯುಕ್ತರು (ಆಡಳಿತ)**
**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**

ಗೆ,
1) **ಜಂಟಿ ಆಯುಕ್ತರು (ಪೂರ್ವ) / (ದಕ್ಷಿಣ) / (ಪಶ್ಚಿಮ) / (ಬೊಮ್ಮನಹಳ್ಳಿ) / (ರಾ.ರಾ.ನಗರ) / (ಯಲಹಂಕ) / (ಮಹದೇವಪುರ) / (ದಾಸರಹಳ್ಳಿ)**
2) **ಸಂಬಂಧಪಟ್ಟ ಬಟವಾಡೆ ಅಧಿಕಾರಿಗಳು/ ಇಲಾಖಾ ಮುಖ್ಯಸ್ಥರುಗಳಿಗೆ**
3) **ಕಛೇರಿ ಪ್ರತಿ**